DECEMBER 10,2024
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಮಾಜಿ ಮುಖ್ಯಮಂತ್ರಿ, ಕೇಂದ್ರ ಸಚಿವ ಹಾಗೂ ರಾಜ್ಯಪಾಲರಾಗಿದ್ದ, ಎಸ್.ಎಂ.ಕೃಷ್ಣ ಅವರು, ಇಂದು ಬೆಳಗಿನ ಜಾವ 2 ಗಂಟೆ 40 ನಿಮಿಷಕ್ಕೆ ಬೆಂಗಳೂರಿನ ಸದಾಶಿವನಗರದ, ಸ್ವ ಗೃಹದಲ್ಲಿ ವಿಧಿವಶರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರಿಗೆ, 92 ವರ್ಷ ವಯಸ್ಸಾಗಿತ್ತು.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು, ಕೃಷ್ಣ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕಂಬನಿ ಮಿಡಿದಿದ್ದು, ಎಸ್.ಎಂ. ಕೃಷ್ಣ ಅವರು ಅಸಾಧಾರಣ ನಾಯಕರಾಗಿದ್ದರು. ಸಮಾಜದ ಎಲ್ಲ ವರ್ಗಗಳ ಜನರ ಮೆಚ್ಚುಗೆಗೆ ಪಾತ್ರರಾಗಿದ್ದರು. ಅವರು ಯಾವಾಗಲೂ ಇತರರ ಜೀವನವನ್ನು ಸುಧಾರಿಸಲು ದಣಿವರಿಯದೆ ಶ್ರಮಿಸಿದರು. ಕಳೆದ ಹಲವಾರು ವರ್ಷಗಳಿಂದ ಎಸ್.ಎಂ. ಕೃಷ್ಣ ಅವರೊಂದಿಗೆ ಸಂವಾದ ನಡೆಸುವ ಅನೇಕ ಅವಕಾಶಗಳು ತಮಗೆ ದೊರೆತವು. ಅವರ ನಿಧನದಿಂದ ಅತೀವ ದುಃಖವಾಗಿದೆ. ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ತಮ್ಮ ಸಂತಾಪಗಳು ಎಂದು, ಎಕ್ಸ್ ಖಾತೆಯಲ್ಲಿ ಪ್ರಕಟಿಸಿದ್ದಾರೆ.

<><><>

ಮುತ್ಸದ್ದಿ ರಾಜಕಾರಣಿ, ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ, ತೀವ್ರ ಆಘಾತವಾಯಿತು. ಅವರ ಕುಟುಂಬದವರಂತೆ ತಾವೂ ಸಮಾನ ದುಃಖಿ. ದೇವರು ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ. ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸುವುದಾಗಿ, ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಅವರು, ಸಂತಾಪ ಸೂಚಿಸಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂತಾಪ ಸೂಚಿಸಿದ್ದು, ಎಸ್.ಎಂ.ಕೃಷ್ಣ ಅವರು, ಮುತ್ಸದ್ದಿ ರಾಜಕಾರಣಿ. ಅವರು ನಾಡಿಗೆ ಸಲ್ಲಿಸಿದ ಸೇವೆ ಅನುಪಮವಾದುದು.

ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ, ರಾಜ್ಯ ಸದಾ ಋಣಿ ಎಂದಿದ್ದಾರೆ.

<><><>

ರಾಜ್ಯದ ವಿಧಾನಸಭಾಧ್ಯಕ್ಷರು, ಉಪ ಮುಖ್ಯಮಂತ್ರಿಗಳು, ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ರಾಜ್ಯಪಾಲರೂ ಸೇರಿದಂತೆ ಅನೇಕ ಉನ್ನತ ಹುದ್ದೆಗಳಲ್ಲಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ರಾಜ್ಯಕ್ಕೆ, ದೇಶಕ್ಕೆ ತಮ್ಮದೇ ಆದ ಅನುಪಮ ಕೊಡುಗೆ ನೀಡಿದ್ದ ಹಿರಿಯರು, ಮುತ್ಸದ್ದಿಗಳಾದ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಬಹಳ ದುಃಖವಾಗಿದೆ ಎಂದು, ಕೇಂದ್ರ ಸಚಿವ ಹಾಗೂ ಜೆಡಿಎಸ್ ಮುಖಂಡ ಎಚ್.ಡಿ. ಕುಮಾರಸ್ವಾಮಿ ಎಕ್ಸ್ ಜಾಲತಾಣದಲ್ಲಿ, ಕಂಬನಿ ಮಿಡಿದಿದ್ದಾರೆ.

<><><>

ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ, ಉಪ ಮುಖ್ಯಮಂತ್ರಿ ಹಾಗೂ ಕೃಷಿ ಖಾತೆ ಸಚಿವರು ಕಂಬನಿ ಮಿಡಿದಿದ್ದು, ಕೃಷ್ಣ ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ. ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬ ವರ್ಗ ಮತ್ತು ಅಭಿಮಾನಿಗಳ ದು:ಖದಲ್ಲಿ ತಾವು ಸಹ ಭಾಗಿ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು, ಭಗವಂತನಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

<><><>

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಸಂತಾಪ ವ್ಯಕ್ತಪಡಿಸಿದ್ದು, ಎಸ್.ಎಂ ಕೃಷ್ಣ ಅವರ ನಿಧನ ನೋವು ತಂದಿದೆ. ರಾಜ್ಯದ ಮುಖ್ಯಮಂತ್ರಿಯಾಗಿ, ಹಣಕಾಸು ಖಾತೆ ಸಚಿವರಾಗಿ, ಕೃಷ್ಣ ಅವರು, ಉತ್ತರ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ಕೊಡುಗೆಗಳನ್ನು ನೀಡಿದ್ದಾರೆ ಎಂದು, ಸ್ಮರಿಸಿದ್ದಾರೆ.

<><><>

ಎಸ್.ಎಂ ಕೃಷ್ಣ ಅವರು ರಾಜ್ಯ ಕಂಡಂತಹ ಅಪ್ರತಿಮ ರಾಜಕಾರಣಿ, ದೂರದೃಷ್ಠಿಯುಳ್ಳ ಮುತ್ಸದ್ದಿ ನಾಯರೋರ್ವರ ಅಗಲಿಕೆ ನೋವನ್ನುಂಟು ಮಾಡಿದೆ ಎಂದು ಗೃಹ ಖಾತೆ ಸಚಿವ ಡಾಕ್ಟರ್ ಜಿ. ಪರಮೇಶ್ವರ ಕಂಬನಿ ಮಿಡಿದಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ನಿಧನದ ಹಿನ್ನೆಲೆ, ನಾಳೆ ರಾಜ್ಯಾದ್ಯಂತ ಸರ್ಕಾರಿ ರಜೆ ಘೋಷಿಸಲಾಗಿದೆ; 12ನೇ ತಾರೀಖಿನ ವರೆಗೆ ಮೂರು ದಿನಗಳ ಶೋಕಾಚರಣೆ ಪ್ರಕಟಿಸಲಾಗಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ಇಂದು ರಾತ್ರಿ 8 ಗಂಟೆಗೆ ಪಾರ್ಥಿವ ಶರೀರವನ್ನು ಮದ್ದೂರಿಗೆ ಕೊಂಡೊಯ್ಯಲಾಗುವುದು. ನಾಳೆ ಮಧ್ಯಾಹ್ನ 3 ಗಂಟೆಯ ವರೆಗೆ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗುವುದು. ಸಂಜೆ 4 ಗಂಟೆಯ ಬಳಿಕ, ಸಕಲ ಸರ್ಕಾರಿ ಗೌರವಗಳೊಂದಿಗೆ, ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ, ಅಂತ್ಯಕ್ರಿಯೆ ಜರುಗಲಿದೆ ಎಂದು, ಹೇಳಿದರು.

<><><>

ರಾಜ್ಯ ಸರ್ಕಾರದ ಶಿಷ್ಟಾಚಾರ ವಿಭಾಗದ ಉಪ ಕಾರ್ಯದರ್ಶಿ ಎಲಿಷ ಆಂಡ್ರೂಸ್ ಬೆಂಗಳೂರಿನಲ್ಲಿ ಮಾಹಿತಿ ನೀಡಿದ್ದು, ಇಂದಿನಿಂದ ಮೂರು ದಿನಗಳ ಕಾಲ, ಯಾವುದೇ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ಜೊತೆಗೆ ರಾಷ್ಟ್ರಧ್ವಜವನ್ನು ಅರ್ಧಮಟ್ಟಕ್ಕೆ ಹಾರಿಸಲು, ಸೂಚಿಸಲಾಗಿದೆ, ಎಂದಿದ್ದಾರೆ.

<><><>

ಪಾರ್ಥಿವ ಶರೀರದ ಅಂತ್ಯಕ್ರಿಯೆ ನಡೆಯಲಿರುವ, ಮಂಡ್ಯ ಜಿಲ್ಲೆ, ಮದ್ದೂರು ತಾಲೂಕು, ಸೋಮನಹಳ್ಳಿಯಲ್ಲಿ ನಿಗದಿತ ಸ್ಥಳಕ್ಕೆ, ಜಿಲ್ಲಾಧಿಕಾರಿ ಕುಮಾರ, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಶೇಕ್ ತನ್ವೀರ್ ಆಸೀಫ್ ಹಾಗೂ ಮದ್ದೂರು ಶಾಸಕ ಕೆ.ಎಂ.ಉದಯ್‌ಗೌಡ ಭೇಟಿ ನೀಡಿ, ಪೂರ್ವ ಸಿದ್ಧತೆ ಆರಂಭಿಸಿದ್ದಾರೆ.

<><><>

ರಾಜ್ಯಾದ್ಯಂತ ಶೋಕಾಚರಣೆ ಹಿನ್ನೆಲೆ, ಬೆಳಗಾವಿಯ ಖಾಸಗಿ ರೆಸಾರ್ಟ್‌ನಲ್ಲಿ ಇಂದು ಸಂಜೆ ಆಯೋಜಿಸಲಾಗಿದ್ದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಮುಂದೂಡಲಾಗಿದೆ ಎಂದು, ಕೆ.ಪಿ.ಸಿ.ಸಿ. ಅಧ್ಯಕ್ಷ ಡಿ.ಕೆ.ಶಿವಕುಮಾರ, ಬೆಂಗಳೂರಿನಲ್ಲಿ ತಿಳಿಸಿದ್ದಾರೆ.

<><><>

'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್'ನ ಪ್ರಸಕ್ತ ಸಾಲಿನ, ಸೈಬರ್ ಭದ್ರತೆ ಆವೃತ್ತಿ, ನಾಳೆ 11ನೇ ತಾರೀಖಿನಿಂದ, ಎರಡು ದಿನ ದೇಶಾದ್ಯಂತ ನಡೆಯಲಿದೆ. ಮೈಸೂರಿನ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ – ಎನ್.ಐ.ಇ. ಹಾಗೂ ಬೆಳಗಾವಿಯ ವಿಶ್ವೇಶ್ವರಾಯ ತಾಂತ್ರಿಕ ಮತ್ತು ಅಭಿಯಾಂತ್ರಿಕ ವಿಶ್ವವಿದ್ಯಾಲಯಗಳು ನೋಡಲ್ ಕೇಂದ್ರಗಳಾಗಿ, ಕಾರ್ಯನಿರ್ವಹಿಸಲಿವೆ. ವಿಶೇಷವಾಗಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮತ್ತು ಆಸಕ್ತ ಟೆಕ್ನೋಸ್ಯಾವಿ ಯುವಜನತೆ ಪಾಲ್ಗೊಳ್ಳಲಿದ್ದಾರೆ. ಪ್ರಸ್ತುತ ನಮ್ಮ ದೇಶ ಎದುರಿಸುತ್ತಿರುವ, 250ಕ್ಕೂ ಹೆಚ್ಚು ಸವಾಲುಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಡಿಜಿಟಲ್ ಜಗತ್ತಿನ, ನೈಜ ಪ್ರಪಂಚದ ಸಮಸ್ಯೆಗಳಿಗೆ, ವಿದ್ಯಾರ್ಥಿ ಸಮುದಾಯದ ವಿನೂತನ ಮತ್ತು ಸೃಜನಾತ್ಮಕ ಪರಿಹಾರೋಪಾಯಗಳನ್ನು ಹೇಗೆ ಬಳಸಬಹುದು ಎಂಬ, ಸಾಧ್ಯತೆಗಳಿಗೆ ಹ್ಯಾಕಥಾನ್ ಅತ್ಯುತ್ತಮ ವೇದಿಕೆ ಕಲ್ಪಿಸಲಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>